ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಮಾನ್ಯ ಸಭಾಧ್ಯಕ್ಷರು [?]

ಪತ್ರಿಕೆಯ ಹೆಸರು : NAME OF THE NEWS PAPER : ವಿಶ್ವವಾಣಿ [?]

ದಿನಾಂಕ : DATE : 14/07/2019

# ಶಾಸಕರ ಆರೋಪದಲ್ಲಿ ಹುರುಳಿಲ್ಲ

14/7

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಕರ್ನಾಟಕ ವಿಧಾನಸಭೆ ಸ್ಪೀಕರ್ ಕೆ.ಆರ್. ರಮೇಶ್ ಕುಮಾರ್ ಸುಪ್ರೀಂ ಕೋರ್ಟ್‌ಗೆ 18 ಪುಟಗಳ ಮತ್ತೊಂದು ಪ್ರಮಾಣಪತ್ರ ಸಲ್ಲಿಸಿದ್ದಾರೆ. ಪ್ರಮಾಣ ಪತ್ರದಲ್ಲಿ ರಾಜೀನಾಮೆ ಸಲ್ಲಿಸಿದ ಎಂಟು ಶಾಸಕರ ವಿರುದ್ಧವೂ ಅನರ್ಹತೆ ಪ್ರಕರಣಗಳು ದಾಖಲಾಗಿವೆ ಎಂದು ತಿಳಿಸಿದ್ದಾರೆ.

ಜು.11ರಂದು 2 ಗಂಟೆಗೆ ಒಂದು ಪ್ರಮಾಣಪತ್ರ ಸಲ್ಲಿಸಿದ್ದು, ಸಮಯದ ಕೊರತೆಯಿಂದ ವಿವರವಾಗಿ ಮಾಹಿತಿ ನೀಡಲು ಸಾಧ್ಯವಾಗಿಲ್ಲ, ಅತೃಪ್ತ ಶಾಸಕರು ದುರುದ್ದೇಶದಿಂದ ತಮ್ಮ ವಿರುದ್ಧ ದೂರು ನೀಡಿದ್ದಾರೆ. ಅವರು ನೀಡಿರುವ ದೂರಿನಲ್ಲಿ ಯಾವುದೇ ಹುರುಳಿಲ್ಲ. ಜು.6ರಂದು ಮಾಹಿತಿ ನೀಡದೆ ಕಚೇರಿಗೆ ಬಂದು ರಾಜೀನಾಮೆ ನೀಡಿದ್ದಾರೆ. ರಾಜೀನಾಮೆ ನೀಡಿದ ಶಾಸಕರಿಗೆ ನಮ್ಮ ಕಚೇರಿಯಿಂದ ಸ್ವೀಕೃತಿ ಪ್ರತವನ್ನೂ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಜು.6 ರಂದು ನೀಡಿದ 13 ರಾಜೀನಾಮೆ ಪತ್ರಗಳನ್ನು ಪರಿಶೀಲಿಸಲಾಗಿದೆ. ಅವುಗಳಲ್ಲಿ ಐದು ರಾಜೀನಾಮೆಗಳು ಕ್ರಮಬದ್ಧವಾಗಿದ್ದು, ಉಳಿದ ಎಂಟು ರಾಜೀನಾಮೆಗಳು ಕ್ರಮಬದ್ಧವಾಗಿಲ್ಲ. ಈ ಬೆಳವಣಿಗೆಯನ್ನು ರಾಜ್ಯಪಾಲರ ಗಮನಕ್ಕೂ ತರಲಾಗಿದೆ. ಜು.10ರಂದು ಮತ್ತೆ 11 ಶಾಸಕರು ರಾಜೀನಾಮೆ ಸಲ್ಲಿಸಿದ್ದಾರೆ. ಇಡೀ ಪ್ರಕ್ರಿಯೆಯ ವಿಡಿಯೊ ದಾಖಲೆಗಳನ್ನು ಸುಪ್ರೀಂಕೋರ್ಟ್ ರಿಜಿಸ್ಟ್ರಾರ್ ಜನರಲ್ ಅವರಿಗೆ ಸಲ್ಲಿಸಲಾಗಿದೆ ಎಂದು ತಿಳಿಸಿದ್ದಾರೆ ಜು.10ರಂದು ಈ ಶಾಸಕರ ವಿರುದ್ಧ ಕಾಂಗ್ರೆಸ್ ಅನರ್ಹತೆ ಅರ್ಜಿ ಸಲ್ಲಿಸಿದೆ. ರಮೇಶ್ ಜಾರಕಿಹೊಳಿ ಹಾಗೂ ಮಹೇಶ್ ಕುಮಟಳ್ಳಿ ವಿರುದ್ಧ ಈ ಮೊದಲೇ ಅನರ್ಹತೆ ದೂರು ದಾಖಲಾಗಿತ್ತು. ಇದರ ಬಗ್ಗೆ ಈಗಾಗಲೇ ವಿಚಾರಣೆ ನಡೆಸಿ ತೀರ್ಪನ್ನು ಕಾಯ್ದಿರಿಸಲಾಗಿದೆ ಎಂದರು.

ಜು.6ರಂದು ರಾಜೀನಾಮೆ ಸಲ್ಲಿಸಿದ 10 ಶಾಸಕರು, ಸ್ಪೀಕರ್ ರಾಜೀನಾಮೆ ಅಂಗೀಕರಿಸಲು ತಡ ಮಾಡುತ್ತಿದ್ದಾರೆ ಎಂದು ಆರೋಪಿಸಿ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ದಾಖಲಿಸಿದ್ದರು. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ ಜು. 10ರಂದು ಶಾಸಕರು ಸ್ಪೀಕರ್ ಅವರನ್ನು ಖುದ್ದಾಗಿ ಭೇಟಿಯಾಗಿ ಮತ್ತೊಮ್ಮೆ ರಾಜೀನಾಮೆ ಸಲ್ಲಿಸಬೇಕು ಮತ್ತು ಆ ರಾಜೀನಾಮೆಗಳ ಬಗ್ಗೆ ಅಂದೇ ಸ್ಪೀಕರ್ ತೀರ್ಮಾನಿಸಬೇಕು ಎಂದು ಸೂಚನೆ ನೀಡಿತ್ತು. ಆದರೆ ರಾಜೀನಾಮೆಗಳನ್ನು ಅಧ್ಯಯನ ಮಾಡಲು ಸಮಯಾವಕಾಶದ ಅಗತ್ಯತೆ ಇದೆ ಎಂದು ಸ್ಪೀಕರ್ ಪರ ವಕೀಲರು ಜು.11ರ ವಿಚಾರಣೆ ವೇಳೆ ತಿಳಿಸಿದ್ದರು. ನ್ಯಾಯಾಲಯ ಶಾಸಕರ ರಾಜೀನಾಮೆಯಲ್ಲಿ ಅಂಗೀಕರಿಸುವುದು, ಅನರ್ಹತೆ ಮಾಡುವುದು ಸೇರಿದಂತೆ ಮುಂದಿನ ಪ್ರಕ್ರಿಯೆ ನಡೆಸದಂತೆ ಯಥಾಸ್ಥಿತಿ ಕಾಯ್ದುಕೊಳ್ಳಲು ಆದೇಶ ನೀಡಿ ವಿಚಾರಣೆಯನ್ನು ಮಂಗಳವಾರಕ್ಕೆ ಮುಂದೂಡಿ...



> “ಈಗ ಸುಪ್ರೀಂಕೋರ್ಟ್‌ಗೆ ಅರ್ಜಿ ಸಲ್ಲಿಸಿರುವ ಎಂಟು ಶಾಸಕರ ವಿರುದ್ಧವೂ ಅನರ್ಹತೆ ದೂರು ದಾಖಲಾಗಿದೆ. ಇದನ್ನೆಲ್ಲಾ ಪರಿಶೀಲನೆ ನಡೆಸಬೇಕಾಗಿರುವುದರಿಂದ ತಡವಾಗುತ್ತಿದೆ. ಶಾಸಕರು ವಾಸ್ತವಾಂಶ ಮುಚ್ಚಿಟ್ಟು ನ್ಯಾಯಾಲಯದ ದಾರಿ ತಪ್ಪಿಸುತ್ತಿದ್ದಾರೆ.
>
> **– ರಮೇಶ್ ಕುಮಾರ್** ಸ್ಪೀಕರ್

2